**OS 198/2015**
**DW-1**

**<u>ದಿನಾಂಕಃ 27.06.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

<u>ಪಾಟೀ ಸವಾಲುಃ ವಾದಿ ಪರ ಶ್ರೀ. ಎ ಎಲ್ ಎಸ್ ವಕೀಲರಿಂದಃ</u>

ನಾನು ಎಸ್ ಎಸ್ ಎಲ್ ಸಿ ವರೆಗೆ ವಿದ್ಯಾಭ್ಯಾಸ ಮಾಡಿರುತ್ತೇನೆ. ನನ್ನ ತಂದೆ ಚಿಕ್ಕಯ್ಯರವರು ಕೆ ಇ ಬಿ ಯಲ್ಲಿ ಲೈನ್ ಮೆನ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ನನ್ನ ತಂದೆಯವರಿಗೆ ಓದು ಬರಹ ಬರುತ್ತಿರಲಿಲ್ಲ. ನನ್ನ ತಂದೆ ಕುಡಿದು ಬಂದು ಗಲಾಟೆ ಮಾಡುತ್ತಿದ್ದರು. ಸದರಿ ವಿಚಾರದ ಬಗ್ಗೆ ನನ್ನ ತಾಯಿಯಾಗಲಿ ಅಥವಾ ನಾನಾಗಲಿ ಕೆ ಇ ಬಿ ಮೇಲಾಧಿಕಾರಿಗಳಿಗೆ ಅಥವಾ ಪೋಲೀಸ್ ಠಾಣೆಗೆ ದೂರನ್ನು ಸಲ್ಲಿಸಿರಲಿಲ್ಲ. ನಮ್ಮ ತಂದೆಯು ಜೀವಂತ ಇರುವಾಗ ದಿನಾಂಕ 09.10.2012 ರಲ್ಲಿ ವಾದಿಯವರಿಂದ ಕುಟುಂಬದ ನಿರ್ವಹಣೆಗಾಗಿ ರೂ.2,00,000/- ಹಣವನ್ನು ಸಾಲವಾಗಿ ಪಡೆದುಕೊಂಡಿದ್ದರು ಎಂದರೆ ಸರಿಯಲ್ಲ. ನನ್ನ ತಂದೆ ಮಾಡಿದಂತಹ ಸಾಲವನ್ನು ನಾನು ಮತ್ತು ನನ್ನ ಕುಟುಂಬದವರು ತೀರಿಸುವ ಭಾಧ್ಯತೆಯನ್ನು ಹೊಂದಿದ್ದೇವೆ ಎಂದರೆ ಸರಿಯಲ್ಲ. ವಾದಿಯವರಿಗೆ ಸದರಿ ಸಾಲದ ಹಣವನ್ನು ಮರುಪಾವತಿಸಬೇಕಾಗುತ್ತದೆ ಎಂಬ ಉದ್ದೇಶದಿಂದ ಸದರಿ ಭಾಧ್ಯತೆಯಿಂದ ತಪ್ಪಿಸಿಕೊಳ್ಳಲು ಸುಳ್ಳು ತಕರಾರನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ</u>** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಲಯ, ಟಿ ನರಸಿಪುರ